# All India Radio: Bangalore
# Regional Bulletin In Kannada
# 26.11.2025 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

**<><><><>**

ಮುಖ್ಯಾಂಶಗಳು

1. ರಾಜ್ಯದೆಲ್ಲೆಡೆ ಇಂದು ಸಂವಿಧಾನ ದಿನಾಚರಣೆ : ಸ್ವಾತಂತ್ರ್ಯ, ಸಮಾನತೆ, ಅಂಬೇಡ್ಕರ್ ಆಶಯ - ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಮತ
2. ಪ್ರಧಾನಿ ಮೋದಿ ಭೇಟಿ ಹಿನ್ನೆಲೆ - ದಕ್ಷಿಣಕನ್ನಡ, ಉಡುಪಿ ಜಿಲ್ಲೆಯಲ್ಲಿ ಬಿಗಿ ಭದ್ರತೆ
3. ದತ್ತ ಜಯಂತಿ ಉತ್ಸವಕ್ಕೆ ಇಂದು ಚಿಕ್ಕಮಗಳೂರಿನಲ್ಲಿ ಚಾಲನೆ ; ನೂರಾರು ಭಕ್ತರಿಂದ ದತ್ತ ಮಾಲೆ ಧಾರಣೆ
4. ರಾಜ್ಯದೆಲ್ಲೆಡೆ ಇಂದು ಚಂಪಾ ಷಷ್ಠಿ - ಸುಬ್ರಹ್ಮಣ್ಯ ದೇವಾಲಯಗಳಲ್ಲಿ ಭಕ್ತರಿಂದ ಪೂಜೆ

<><><><>

ರಾಜ್ಯದೆಲ್ಲೆಡೆ ಇಂದು ಸಂವಿಧಾನ ದಿನಾಚರಣೆ ಆಚರಿಸಲಾಯಿತು. ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಬೆಂಗಳೂರಿನ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ "ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು  ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಸಂವಿಧಾನದ ಆಶಯ. ಆದರೆ ಸ್ವಾತಂತ್ರ್ಯ ದೊರೆತು ಇಷ್ಟು ವರ್ಷವಾದರೂ ಸಂವಿಧಾನದ ಆಶಯ ಈಡೇರಿಲ್ಲ ಎಂದು ತಿಳಿಸಿದ್ದಾರೆ. ಕೆಳಜಾತಿಯವರಿಗೆ ಆರ್ಥಿಕ ಶಕ್ತಿ ಬಂದಾಗ ಮಾತ್ರ ಜಾತಿ ಪದ್ಧತಿ ದುರ್ಬಲವಾಗಲು ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನ ಕೆಪಿಸಿಸಿ ಕಚೇರಿ ಭಾರತ್ ಜೋಡೋ ಭವನದಲ್ಲಿ ಸಂವಿಧಾನ ದಿನಾಚರಣೆ ಕಾರ್ಯಕ್ರಮ ನಡೆಯಿತು. ಕೆಪಿಸಿಸಿ ಅಧ್ಯಕ್ಷರೂ ಆದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕಾನೂನು ಸಚಿವ ಎಚ್.ಕೆ.ಪಾಟೀಲ್, ಕೆಪಿಸಿಸಿ ಪ್ರಚಾರ ಸಮಿತಿ ಅಧ್ಯಕ್ಷ ವಿನಯ್ ಸೊರಕೆ ಭಾಗವಹಿಸಿದ್ದರು. ಬಲಿಷ್ಠ ಸಂವಿಧಾನದ ಅಡಿಯಲ್ಲಿ ವಿಕಸಿತ ಭಾರತ ನಿಶ್ಚಿತ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ಭಾರತದ ಏಕತೆ, ಅಖಂಡತೆ ಮತ್ತು ಸಾರ್ವಭೌಮತ್ವ ಇನ್ನು ಗಟ್ಟಿಯಾಗಿ ಉಳಿಯಲು  ದೇಶದ ಸಂವಿಧಾನವೇ ಕಾರಣ ಎಂದು ಅಭಿಪ್ರಾಯಪಟ್ಟಿದ್ದಾರೆ. ಸಂವಿಧಾನ ದಿನಾಚರಣೆಯ ಅಂಗವಾಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಕೇಂದ್ರ ಕಚೇರಿಯ ಆವರಣದಲ್ಲಿರುವ ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆಗೆ ಹಣಕಾಸು ಹಾಗೂ ಆಡಳಿತ ವಿಭಾಗದ ವಿಶೇಷ ಆಯುಕ್ತ

ಡಾ.ಕೆ.ಹರೀಶ್ ಕುಮಾರ್ ಮಾಲಾರ್ಪಣೆ ಮಾಡಿ ಪುಷ್ಪನಮನ ಸಲ್ಲಿಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆಗಳಲ್ಲಿ ಇಂದು ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಶಾಲಾ ಕಾಲೇಜುಗಳಲ್ಲಿ ಸಂವಿಧಾನ ಪೀಠಿಕೆಯ ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ದೊಡ್ಡಬಳ್ಳಾಪುರದಲ್ಲಿ ತಾಲ್ಲೂಕು ಆಡಳಿತದಿಂದ ನಡೆದ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಸಂವಿಧಾನ ಪೀಠಿಕೆಯ ರಥದೊಂದಿಗೆ ನೂರಾರು ವಿದ್ಯಾರ್ಥಿಗಳು ಸಂವಿಧಾನದ ಮಹತ್ವ ಸಾರುವ ಭಿತ್ತಿ ಪತ್ರಗಳನ್ನು ಹಿಡಿದು ಜಾಥಾ ನಡೆಸಿದರು. ಭಾರತ ಉತ್ತಮವಾದ ಸಂವಿಧಾನ ವ್ಯವಸ್ಥೆಯನ್ನು ಹೊಂದಿದೆ ಎಂದು ದಾವಣಗೆರೆ ಜಿಲ್ಲೆಯ ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ತಿಳಿಸಿದ್ದಾರೆ. ಜಿಲ್ಲಾಡಳಿತ ಭವನದಲ್ಲಿಂದು ಹಮ್ಮಿಕೊಂಡಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸರ್ವರಿಗೂ ಸಮಾನವಾಗಿ ಅವಕಾಶಗಳನ್ನು ನೀಡುವ ಮೂಲಕ ಸಂವಿಧಾನ ಎಲ್ಲರನ್ನೂ ರಕ್ಷಿಸುತ್ತಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ದೇವನಹಳ್ಳಿಯ ಅಂಬೇಡ್ಕರ್ ಭವನದಲ್ಲಿ ಸಂವಿಧಾನ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾಧಿಕಾರಿ ಎ.ಬಿ.ಬಸವರಾಜು ಪ್ರತಿಜ್ಞಾ ವಿಧಿ ಬೋಧಿಸಿ, ಸಂವಿಧಾನವನ್ನು ಗೌರವಿಸಬೇಕಾಗಿರುವುದು ಪ್ರತಿಯೊಬ್ಬ ಪ್ರಜೆಯ ಕರ್ತವ್ಯವಾಗಿದೆ ಎಂದು ಹೇಳಿದರು.

<><><><>

ಇದೇ ೨೮ರಂದು ಪ್ರಧಾನಿ ನರೇಂದ್ರ ಮೋದಿ ಅವರು, ಉಡುಪಿ ಜಿಲ್ಲೆಗೆ ಆಗಮಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಾದ್ಯಂತ ಬಿಗಿ ಭದ್ರತೆ ಆಯೋಜಿಸಲಾಗಿದೆ. ವಾಹನ ತಪಾಸಣೆಯನ್ನು ಬಿಗಿಗೊಳಿಸಲಾಗಿದೆ. ಜಿಲ್ಲೆಗೆ ಆಗಮಿಸುವ ಪ್ರತಿ ವಾಹನದ ಮೇಲೂ ಪೊಲೀಸರು ನಿಗಾ ಇಟ್ಟಿದ್ದಾರೆ. ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸುವ ಪ್ರಧಾನಿ ಬಳಿಕ ಉಡುಪಿಗೆ ತೆರಳಲಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ಇಂದು ಭದ್ರತಾ ಕುರಿತಂತೆ ಸಭೆ ನಡೆಯಿತು. ಹಿರಿಯ ಎಸ್.ಪಿ.ಜಿ ಅಧಿಕಾರಿಗಳ ಉಪಸ್ಥಿತಿಯಲ್ಲಿ ನಡೆದ ಈ ಸಭೆಯಲ್ಲಿ ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ, ಪೊಲೀಸ್ ವರಿಷ್ಠಾಧಿಕಾರಿ ಸುಧೀರ್ ಕುಮಾರ್ ರೆಡ್ಡಿ ಸೇರಿದಂತೆ ವಿಮಾನ ನಿಲ್ದಾಣದ ಅಧಿಕಾರಿಗಳು, ಸಿ.ಐ.ಎಸ್.ಎಫ್, ಪೊಲೀಸ್ ಹಾಗೂ ಜಿಲ್ಲಾಡಳಿತದ ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದರು. ಪ್ರಧಾನಿ ಆಗಮನದ ಹಿನ್ನೆಲೆಯಲ್ಲಿ ವಿಮಾನ ನಿಲ್ದಾಣದಲ್ಲಿ ಎಲ್ಲಾ ರೀತಿಯ ಅತ್ಯುನ್ನತ ಭದ್ರತಾ ವ್ಯವಸ್ಥೆ ಕೈಗೊಳ್ಳಬೇಕು. ಆಂಬುಲೆನ್ಸ್ ವ್ಯವಸ್ಥೆ, ಅಗ್ನಿಶಾಮಕ ವಾಹನ ಸೇರಿದಂತೆ ಎಲ್ಲಾ ಸೌಲಭ್ಯವನ್ನು ಸುಸ್ಥಿತಿಯಲ್ಲಿ ಇಟ್ಟುಕೊಳ್ಳಬೇಕು ಎಂದು ಎಸ್.ಪಿ.ಜಿ ಅಧಿಕಾರಿಗಳು ಸೂಚಿಸಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ಮಂಗಳೂರು

ವಿಮಾನ ನಿಲ್ದಾಣದಿಂದ ಉಡುಪಿಗೆ ತೆರಳುವ ರಾಷ್ಟ್ರೀಯ ಹೆದ್ದಾರಿಯನ್ನು ಸುಸ್ಥಿತಿಯಲ್ಲಿ ಇಡಬೇಕು. ಅಗತ್ಯ ಬಿದ್ದರೆ ಬಳಸಲು ಸರ್ಕ್ಯೂಟ್ ಹೌಸ್ ಹಾಗೂ ಉನ್ನತ ಆಸ್ಪತ್ರೆಯನ್ನು ಸನ್ನದ್ಧವಾಗಿಡಲು ಅಧಿಕಾರಿಗಳು ಸೂಚನೆ ನೀಡಿದ್ದಾರೆ.

<><><>

ದತ್ತ ಜಯಂತಿ ಉತ್ಸವಕ್ಕೆ ಚಿಕ್ಕಮಗಳೂರು ನಗರದಲ್ಲಿ ಇಂದು ಚಾಲನೆ ದೊರೆತಿದೆ. ನಗರದ ಕಾಮಧನು ಗಣಪತಿ ದೇವಾಲಯದಲ್ಲಿ ದತ್ತಾತ್ರೇಯ ಸ್ವಾಮಿ ವಿಗ್ರಹಕ್ಕೆ ವಿಶೇಷ ಪೂಜೆ ಸಲ್ಲಿಸಿದ ಬಳಿಕ ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಸೇರಿದಂತೆ ನೂರಾರು ಭಕ್ತರು ದತ್ತಮಾಲೆ ಧಾರಣೆ ಮಾಡಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದತ್ತಪೀಠದಲ್ಲಿ ನಿತ್ಯ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ದತ್ತ ಜಯಂತಿ ಕಾರ್ಯಕ್ರಮ ಮಾತ್ರ ಪ್ರತಿ ವರ್ಷ ನಿಗದಿತ ದಿನದಂದು ನಡೆಸಿಕೊಂಡು ಬರಲಾಗುತ್ತಿದೆ. ಈ ಬಾರಿ ಅನುಸೂಯ ಯಾತ್ರೆ, ಶೋಭಾಯಾತ್ರೆ, ದತ್ತ ಜಯಂತಿ ಉತ್ಸವಗಳು ನಡೆಯಲಿವೆ ಎಂದು ತಿಳಿಸಿದ್ದಾರೆ.

<><><>

ಮುಖ್ಯಮಂತ್ರಿ ಹುದ್ದೆಗಾಗಿ ನಡೆಯುತ್ತಿರುವ ಕಿತ್ತಾಟದಲ್ಲಿ ರಾಜ್ಯ ಸರ್ಕಾರ ರೈತರನ್ನು ಸಂಪೂರ್ಣವಾಗಿ ಮರೆತಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ರೈತರ ಬೇಡಿಕೆಯಂತೆ ಮೆಕ್ಕೆಜೋಳ ಖರೀದಿ ಕೇಂದ್ರ ಆರಂಭಿಸಲು ಸರ್ಕಾರ ಮೀನಾಮೇಷ ಎಣಿಸುತ್ತಿದೆ ಎಂದು ದೂರಿದ್ದಾರೆ. ರೈತರ ಜೀವ ಉಳಿಸಲು ಹೈಕಮಾಂಡ್ ಆದೇಶ ಬೇಕೇ ಎಂದು ಪ್ರಶ್ನಿಸಿದ್ದಾರೆ. ರೈತರನ್ನು ನಿರ್ಲಕ್ಷಿಸಿದರೆ ಹೋರಾಟ ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><><>

ರಾಜ್ಯದೆಲ್ಲೆಡೆ ಇಂದು ಚಂಪಾ ಷಷ್ಠಿ ಆಚರಿಸಲಾಗುತ್ತಿದೆ. ಕುಕ್ಕೆ ಸುಬ್ರಹ್ಮಣ್ಯದಲ್ಲಿ ಚಂಪಾ ಷಷ್ಠಿ ಹಿನ್ನೆಲೆಯಲ್ಲಿ ಮುಂಜಾನೆಯಿಂದಲೇ ಭಕ್ತರು ದೇವಾಲಯಕ್ಕೆ ಭೇಟಿ ನೀಡುತ್ತಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಘಾಟಿ ಕ್ಷೇತ್ರದ ಸುಬ್ರಹ್ಮಣ್ಯ ಸ್ವಾಮಿ ದೇವಾಲಯದಲ್ಲಿ ಇಂದು ಚಂಪಾ ಷಷ್ಠಿ ಅಂಗವಾಗಿ ವಿಶೇಷ ಅಲಂಕಾರ ಹಾಗೂ ಪೂಜಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಭಕ್ತರು ಹುತ್ತಗಳು ಹಾಗೂ ನಾಗರಕಲ್ಲುಗಳಿಗೆ ಪೂಜೆ ಸಲ್ಲಿಸಿ ಹರಕೆ ತೀರಿಸಿದರು. ಇನ್ನೊಂದೆಡೆ ಮೈಸೂರಿನ ಅರಳಿಕಟ್ಟೆ ಸುಬ್ರಹ್ಮಣ್ಯ ಸ್ವಾಮಿ ದೇವಾಲಯದಲ್ಲಿ ಉತ್ಸವಮೂರ್ತಿಯ ಮೆರವಣಿಗೆ ನಡೆಯಿತು.

<><><>

ರಸ್ತೆ ಅಪಘಾತದಲ್ಲಿ ಮೃತರಾದ ಐಎಎಸ್ ಅಧಿಕಾರಿ ಮಹಂತೇಶ್ ಬೀಳಗಿ ಅವರ ಅಂತ್ಯಕ್ರಿಯೆ ಇಂದು ಸರ್ಕಾರಿ ಗೌರವಗಳೊಂದಿಗೆ ನಡೆಯಲಿದೆ. ಈ ಕುರಿತಂತೆ ರಾಜ್ಯ ಸರ್ಕಾರ ಮೃತರ

ಗೌರವಾರ್ಥ ಅಂತ್ಯಕ್ರಿಯೆಯನ್ನು ಪೊಲೀಸ್ ಗೌರವಗಳೊಂದಿಗೆ ನೆರವೇರಿಸುವಂತೆ ಆದೇಶಿಸಿದೆ. ಪಾರ್ಥಿವ ಶರೀರವನ್ನು ಹುಟ್ಟೂರಾದ ರಾಮದುರ್ಗದಲ್ಲಿ ಸಾರ್ವಜನಿಕರ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗಿದೆ. ಜಿಲ್ಲಾಧಿಕಾರಿ, ಪ್ರಾದೇಶಿಕ ಆಯುಕ್ತರು, ಪೊಲೀಸ್ ಅಧಿಕಾರಿಗಳು ಅಂತಿಮ ನಮನ ಸಲ್ಲಿಸಿದರು.

<><><><>

ಕೇಂದ್ರ ಸರ್ಕಾರ ಜಾರಿಗೆ ತಂದಿರುವ ನಾಲ್ಕು ಹೊಸ ಕಾರ್ಮಿಕ ಸಂಹಿತೆಗಳಿಂದಾಗಿ ಕಾರ್ಮಿಕರ ಬದುಕಿಗೆ ಹೊಸ ತಿರುವು ದೊರೆತಂತಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನ ಆಟೋ ಚಾಲಕ ಮತ್ತು ಮಾಲೀಕರ ಸಂಘದ ಅಧ್ಯಕ್ಷ ರಾಜೇಶ್ ಮರೀಲು ಅಭಿಪ್ರಾಯಪಟ್ಟಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಈ ಹಿಂದಿನ ೨೯ ಕಾನೂನುಗಳ ಬದಲಾಗಿ ಹೊಸ ನಾಲ್ಕು ಕಾರ್ಮಿಕ ಸಂಹಿತೆ ಜಾರಿಗೆ ತಂದಿರುವುದರಿಂದ ಕಾರ್ಮಿಕರಿಗೆ ಬಹಳಷ್ಟು ಅನುಕೂಲತೆ ಆಗಲಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ಅಧ್ಯಕ್ಷ ರಾಜೇಶ್ ಮರೀಲು**

<><><><>

ದೀರ್ಘಕಾಲದವರೆಗೆ ಹಕ್ಕು ಪಡೆಯದೆ ಉಳಿದಿರುವ ಬ್ಯಾಂಕ್ ಠೇವಣಿಗಳು, ವಿಮಾ ಕಂತುಗಳು ಮತ್ತು ಷೇರುಗಳನ್ನು ಅವುಗಳ ಮಾಲೀಕರು ಅಥವಾ ಕಾನೂನುಬದ್ಧ ವಾರಸುದಾರರಿಗೆ ಹಸ್ತಾಂತರಿಸುವ ಶಿಬಿರವು ಇದೇ ೨೮ರಂದು ಕಾರವಾರದ ಜಿಲ್ಲಾ ಪಂಚಾಯತ್ ಸಭಾ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಶಿಬಿರದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ದಿಲೀಶ್ ಶಶಿ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ರಾಜಪ್ಪ, ಆರ್‌ಬಿಐ ಅಧಿಕಾರಿ ಮೋನಿ ರಾಜ ಬ್ರಹ್ಮ, ನಬಾರ್ಡ್ ಡಿಡಿಎಂ ಸುಶೀಲ ನಾಯ್ಕ, ಬ್ಯಾಂಕ್ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಲಿದ್ದಾರೆ.

<><><><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆದ ಸಯ್ಯದ್ ಮುಷ್ತಾಕ್ ಅಲಿ ಟ್ರೋಫಿ ಕ್ರಿಕೆಟ್ ಪಂದ್ಯಾವಳಿಯಲ್ಲಿ ಉತ್ತರಾಖಂಡ್ ತಂಡದ ವಿರುದ್ಧ ಕರ್ನಾಟಕ ೫ ವಿಕೆಟ್‌ಗಳಿಂದ ಗೆಲುವು ಸಾಧಿಸಿದೆ. ಉತ್ತರಾಖಂಡ್ ನೀಡಿದ ೧೯೭ ರನ್‌ಗಳ ಗುರಿ ಬೆನ್ನತ್ತಿದ ಕರ್ನಾಟಕ ೫ ವಿಕೆಟ್ ನಷ್ಟಕ್ಕೆ ೧೯೮ ರನ್ ಗಳಿಸಿತ್ತು. ರಾಜ್ಯದ ಪರ ಸ್ಮರಣ್ ರವಿಚಂದ್ರನ್ ೬೭ ರನ್ ಗಳಿಸಿದರೆ, ಪ್ರವೀಣ್ ದುಬೆ ೩೮, ಮಯಾಂಕ್ ಅಗರ್ವಾಲ್ ೨೯, ಶ್ರೇಯಸ್ ಗೋಪಾಲ್ ೨೯ ರನ್ ಗಳಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>